
# ವೀರ ಲವ -ಲಕ್ಷ್ಮೀಶ -ಕವಿ ಪರಿಚಯ




ಕಾಲ: ಕ್ರಿ. ಶ. ೧೫೫೦

ಸ್ಥಳ : ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲೂಕಿನ ದೇವನೂರು

ಈತನಿಗಿರುವ ಹೆಸರುಗಳು : ಲಕ್ಷ್ಮೀರಮಣ , ಲಕ್ಷ್ಮೀಪತಿ


ಬಿರುದುಗಳು : ಉಪಮಾಲೋಲ , ಕರ್ಣಾಟಕವಿಚೂತವನ ಚೈತ್ರ

ಕೃತಿ -ಜೈಮಿನಿ ಭಾರತ













ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು

# ಆಶಯ ಭಾವ

ನಮ್ಮ ಮಹಾಕಾವ್ಯಗಳಲ್ಲಿ ತಂದೆ -ಮಕ್ಕಳು ಬೇರೆಬೇರೆಯಾಗಿ ಬೆಳೆದು ,ಯಾವುದೋ ಸಂದರ್ಭದಲ್ಲಿ ಮುಖಾಮುಖಿಯಾಗುವ ಸನ್ನಿವೇಶಗಳು ಇವೆ. ಪರಸ್ಪರರ ಸಂಬಂಧದ ಅರಿವಿರದೆ ಸಂಘರ್ಷಕ್ಕೆ ಮುಂದಾಗುವ ಪ್ರಸಂಗಗಳಿವೆ . ಅನಂತರ ಯಾರಿಂದಲಾದರೂ ಸಂಬಂಧ ತಿಳಿದಾಗ ಸಂಘರ್ಷ ಮರೆಯಾಗಿ ಹೊಂದಾಣಿಕೆ ರೂಪದ ಸುಖಾಂತ್ಯವಾಗುವ ಸಂದರ್ಭಗಳೇ ಹೆಚ್ಚು . ಭೀಮ -ಘಟೋತ್ಕಚ ,ಅರ್ಜುನ -ಬಭ್ರುವಾಹನ ,ಲವಕುಶ -ಶ್ರೀರಾಮ ಇವರ ಭೇಟಿ ಇಂತಹ ಪ್ರಸಂಗಗಳಿಗೆ ದೃಷ್ಟಾಂತಗಳು .







ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು



ಲವಕುಶರು ಹುಟ್ಟಿದ್ದು ಋಷ್ಯಾಶ್ರಮದಲ್ಲಾದರೂ ಸಹಜ ಕ್ಷಾತ್ರಗುಣ ,ವೀರತೆಯಿಂದ ಕುದುರೆಯನ್ನು ಕಟ್ಟಿಹಾಕುತ್ತಾರೆ. ಕಷ್ಟ -ಸವಾಲುಗಳು ಬಂದಾಗ ಚಿಕ್ಕವರು, ಅಸಮರ್ಥರು ಎಂದು ಕೂರದೆ ದಿಟ್ಟತನದಿಂದ ಎದುರಿಸಬೇಕೆಂಬ ಬಾಲ್ಯಸಹಜ ಸಾಹಸ ಪ್ರವೃತ್ತಿಯನ್ನು ಇಲ್ಲಿ ಕಾಣಬಹುದು .




ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು



# ಪೂರ್ವಕಥೆ

ರಾಮಾಯಣ ,ಮಹಾಭಾರತ ,ಭಾಗವತಗಳಲ್ಲಿ ಅನೇಕ ಸಾಹಸಿಗಳಾದ ಬಾಲಕರ ಕಥೆಗಳು ಇವೆ . ಅಂತಹವುಗಳಲ್ಲಿ ಲವನ ಕತೆಯೂ ಒಂದು . ರಾವಣನನ್ನು ಸಂಹರಿಸಿ ,ಅಯೋಧ್ಯೆಗೆ ಸೀತಾಸಮೇತನಾಗಿ ಬಂದ ರಾಮ ಪ್ರಜಾನುರಾಗಿಯಾಗಿ ರಾಜ್ಯಭಾರ ಮಾಡುತ್ತಿದ್ದಾನೆ . ಗರ್ಭಿಣಿಯಾದ ಸೀತೆ ಒಂದು ದಿನ ವಾಲ್ಮೀಕಿ ಮಹರ್ಷಿಗಳ ಆಶ್ರಮವನ್ನು ನೋಡಬೇಕೆಂಬ ಆಸೆಯನ್ನು ವ್ಯಕ್ತಪಡಿಸುತ್ತಾಳೆ . ಕಾಕತಾಳೀಯವಾಗಿ ಅದೇ ರಾತ್ರಿ ಪ್ರಜೆಯೊಬ್ಬ ಸೀತೆಯ ಬಗ್ಗೆ ಅವಮಾನದ ಮಾತುಗಳನ್ನು ಆಡುತ್ತಾನೆ . ಇದನ್ನು ತಿಳಿದ ರಾಮನು ತಮ್ಮನಾದ ಲಕ್ಷ್ಮಣನನ್ನು ಕರೆದು ತುಂಬು ಗರ್ಭಿಣಿಯಾದ ಸೀತೆಯನ್ನು ಕಾಡಿನಲ್ಲಿ ಬಿಟ್ಟು ಬರುವಂತೆ ಆಜ್ಞಾಪಿಸುತ್ತಾನೆ . ಪ್ರಜೆಗಳ ಅಭಿಪ್ರಾಯವೇ ಸರ್ವಸ್ವವೆಂದು ತಿಳಿದ ರಾಮನ ಈ ಲಕ್ಷ್ಮಣ ವಾಲ್ಮೀಕಿ ಆಶ್ರಮಕ್ಕೆ ಹೋಗುವ ನೆಪದೊಂದಿಗೆ ಸೀತೆಯನ್ನು ಕಾಡಿಗೆ ಕೊಂಡೊಯ್ಯುತ್ತಾನೆ .




ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು



# ಪೂರ್ವಕಥೆ

ಕಾಡಿನಲ್ಲಿ ಏಕಾಂಗಿಯಾಗಿದ್ದ ಸೀತೆ ದುಃಖಿಸುತ್ತಿರುವ ಸಂದರ್ಭದಲ್ಲಿ ಆ ಪ್ರದೇಶಕ್ಕೆ ಬಂದ ವಾಲ್ಮೀಕಿ ಮಹರ್ಷಿಗಳು  ಸೀತೆಯನ್ನು ತಮ್ಮಾಶ್ರಮಕ್ಕೆ ಕರೆದೊಯ್ಯುತ್ತಾರೆ .ಆಶ್ರಮದಲ್ಲಿ ಕೆಲವೇ ದಿನಕ್ಕೆ ಸೀತೆ ಅವಳಿ ಮಕ್ಕಳನ್ನು ಹಡೆಯುತ್ತಾಳೆ . ವಾಲ್ಮೀಕಿ ಮಹರ್ಷಿಗಳು ಈ ಮಕ್ಕಳಿಗೆ ಕುಶ, ಲವರೆಂದು ನಾಮಕರಣ ಮಾಡಿ ಸಕಲ ವಿದ್ಯಾಪಾರಂಗತರನ್ನಾಗಿ ಮಾಡುತ್ತಾರೆ .





ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು

# ಪೂರ್ವಕಥೆ

ಇತ್ತ ಸೀತೆಯ ಅಗಲುವಿಕೆಯಿಂದ ರಾಮ ಮಾನಸಿಕವಾಗಿ ದುಃಖಿಕ್ಕೀಡಾಗುತ್ತಾನೆ . ರಾವಣನ ವಧೆಯಿಂದ ಬ್ರಹ್ಮಹತ್ಯಾದೋಷ ಬಂದಿರುವುದನ್ನು ಪರಿಹರಿಸಿಕೊಳ್ಳುವುದಕ್ಕಾಗಿ ಮಹರ್ಷಿಗಳ ಆದೇಶದಂತೆ ರಾಮ ಅಶ್ವಮೇಧವನ್ನು ಕೈಗೊಂಡು ,ಸಂಚಾರಕ್ಕೆ ತೆರಳಿದ ಕುದುರೆಯ ಬೆಂಗಾವಲಿಗೆ ಶತ್ರುಘ್ನನನ್ನು ಕಳಿಸುತ್ತಾನೆ. ದೇಶದೇಶಗಳನ್ನು ಸುತ್ತಾಡಿದ ಅಶ್ವಮೇಧದ ಕುದುರೆ ಒಂದು ದಿನ ವಾಲ್ಮೀಕಿ ಆಶ್ರಮಕ್ಕೆ ಬರುತ್ತದೆ . ಶ್ರೀರಾಮನೇ ತನ್ನ ತಂದೆ ಎಂದು ತಿಳಿಯದ ಲವ ಕುದುರೆಯನ್ನು ಕಟ್ಟುವ ಸನ್ನಿವೇಶವೇ ಈ ಪಾಠ ಭಾಗ







ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು

# ಪದಗಳ ಅರ್ಥ

ಅಂಜಿ -ಹೆದರಿ

ಅಬ್ಧಿಪ-ವರುಣ

ಉಪವನ- ಉದ್ಯಾನವನ

ಕದಳಿ-ಬಾಳೆ

ತುರಂಗ -ಕುದುರೆ

ನೆತ್ತಿ -ಹಣೆ

ಬಂಜೆ (ದ್ಭ) -ವಂಧ್ಯಾ (ತ್ಸ) ಸಂತಾನವಿಲ್ಲದವಳು

ಬಡಿ- ಹೊಡೆ ,ಚಚ್ಚು

ಲಿಖಿತ -ಬರೆಹ

ವಾಸಿ- ಪ್ರತಿಜ್ಞೆ

ಅಗಡು- ಶೌರ್ಯ

ಆರ್ಪರ್ -ಸಮರ್ಥರು

ಉರ್ವಿ- ಭೂಮಿ

ಚರಿಸು -ಸಂಚರಿಸು

ನೃಪ-ದೊರೆ

ಪಸುರು- ಹಸುರು

ಮುಳಿ-ಕೋಪ

ವಾಜಿ-ಕುದುರೆ

ಹಯ-ಕುದುರೆ

ಪ್ರಸ್ತುತಿ-ಮಮತಾ ಭಾಗ್ವತ್ ಸ. ಶಿ. ಸ. ಪ್ರೌ. ಶಾ . ಬೇಗೂರು

# ನುಡಿ- ೧

ಬಲ್ಲಗಯ್ಯ ನೃಪರಂಜಿ  ತಡೆಯದೆ ರಘೂದ್ವಹನ |
ಸೊಲ್ಗೇಳಿ ನಮಿಸಲಿಳೆಯೊಳ್ ಚರಿಸುತಧ್ವರದ |
ನಲ್ಲುಗ್ದುರೆ ಬಂದು ವಾಲ್ಮೀಕಿಯ ನಿಜಾಶ್ರಮದ ವಿನಿಯೋಗದುಪವನದೊಳು ||
ಪುಲ್ಗಳ ಪಸುರ್ಗಳಸಿ ಪೊಕ್ಕೊಡಾ ತೋಟಗಾ|
ವಲ್ಗೆ ತನ್ನೊಡನಾಡಿಗಳ ಕೂಡಿ ಲೀಲೆ ಮಿಗೆ |
ಬಿಲ್ಗೊಂಡು ನಡೆತಂದವಂ ಕಂಡನರ್ಚಿತ ಸುವಾಜಿಯಂ ವೀರಲವನು || ೧ ||



ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು

# ಅರ್ಥ

ಬಲಶಾಲಿಗಳಾದ ರಾಜರೂ ಸಹ ಶ್ರೀರಾಮನ ಶ್ರೇಷ್ಠತೆಯ ವಿಚಾರವನ್ನು ಕೇಳಿಯೆ ಕುದುರೆಯನ್ನು ಕಟ್ಟಲು ಹೆದರಿ ,ಅದಕ್ಕೆ ನಮಸ್ಕರಿಸಿ ಅದನ್ನು ತಡೆಯದೇ ಇರಲು ಶ್ರೀರಾಮನ ಯಜ್ಞಾಶ್ವದ ಪ್ರೀತಿಯ ಕುದುರೆಯು ಇಡೀ ಭೂಮಂಡಲದಲ್ಲಿ ಚಲಿಸುತ್ತ ,ವಾಲ್ಮೀಕಿಯ ತಪೋವನದ ಉಪವನದಲ್ಲಿ ಬೆಳೆದು ನಿಂತಿದ್ದ ಹುಲ್ಲಿನ ಹಸುರಿಗೆ ಮನಸೋತು ಆಕರ್ಷಣೆಗೆ ಒಳಗಾಗಿ ಆದಷ್ಟು ಪ್ರವೇಶಿಸಿತು . ಅಲ್ಲಿ ತನ್ನ ಸ್ನೇಹಿತರೊಡನೆ (ಒಡನಾಡಿಗಳೊಡನೆ) ಆಟವಾಡಿ ಮುಗಿಸಿ ಬಿಲ್ಲಿನ ಸಮೇತನಾಗಿ ಬರುತ್ತಿದ್ದ ವೀರ ಲವನು ಆಶ್ರಮವನ್ನು ಪ್ರವೇಶಿಸಿದ್ದ  ಪೂಜಿತ (ಪೂಜಿಸಲ್ಪಟ್ಟಿದ್ದ ) ಸುಂದರ ಕುದುರೆಯನ್ನು ಕಂಡನು .




ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು

# ನುಡಿ-೨

ಎತ್ತಣ ತುರಂಗಮಿದು ಪೊಕ್ಕು ಪೂದೋಟಮಂ
ತೊತ್ತಳದುಳಿದುದು ವಾಲ್ಮೀಕಿ ಮುನಿನಾಥನೇ
ಪೊತ್ತುಮಾರೈವುದೆಂದೆನಗೆ ನೇಮಿಸಿ ಪೋದನಬ್ಧಿಪಂ ಕರೆಸಲಾಗಿ
ಮತ್ತೆ ವರುಣನ ಲೋಕದಿಂ ಬಂದು ಮುಳಿದಪನೆ
ನುತ್ತ ಹಯದೆಡೆಗೆ ನಡೆ ತಂದು ನೋಡಲ್ಕದರ ನೆತ್ತಿಯೊಳ್
ಮೆರೆವ ಪಟ್ಟದ ಲಿಖಿತಮಂ ಕಂಡು ಲವನೋದಿಕೊಳುತಿರ್ದನು



ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು

# ಅರ್ಥ

ಉಪವನದೊಳಕ್ಕೆ ನುಗ್ಗಿದ ಕುದುರೆಯನ್ನು ನೋಡಿದ ಲವನು ಎಲ್ಲಿಯ ಕುದುರೆಯಿದು ?ಉಪವನಕ್ಕೆ ನುಗ್ಗಿ ಹೂದೋಟವನ್ನು ಹಾಳು ಮಾಡಿದೆಯಲ್ಲ ! ವಾಲ್ಮೀಕಿ ಮುನಿಶ್ರೇಷ್ಠರು ವರುಣನು ಕರೆದಿದ್ದರಿಂದ ಅಲ್ಲಿಗೆ ಹೋಗುವಾಗ ನನಗೆ ಈ ಉಪವನವನ್ನು ಕಾಯಲು ಹೇಳಿ ಹೋಗಿದ್ದರು . ಮತ್ತೆ ಅವರು ವರುಣನ ಲೋಕದಿಂದ ಹಿಂದಿರುಗಿ ಬಂದಾಗ ಈ ಹೂದೋಟವು ಹಾಳಾದುದನ್ನು ನೋಡಿ ಮುನಿಸಿಕೊಳ್ಳುವರು ಎಂದು ಯೋಚಿಸುತ್ತ ಕುದುರೆಯೆಡೆಗೆ ಬಂದನು . ಆಗ ಲವನು ಅದರ ಹಣೆಯ ಮೇಲೆ ಬರಹದ ಪಟ್ಟಿಯು ಇದ್ದುದನ್ನು ನೋಡಿ ಅದನ್ನು ಓದತೊಡಗಿದನು .



ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು

# ನುಡಿ-೩

ಉರ್ವಿಯೊಳ್ ಕೌಸಲ್ಯೆ ಪಡೆದ ಕುವರಂ ರಾಮ
ನೋರ್ವನೇ ವೀರನಾತನ ಯಜ್ಞತುರಗಮಿದು
ನಿರ್ವಹಿಸಲಾರ್ಪರಾರಾದೊಡಂ ತಡೆಯಲೆಂದಿರ್ದ ಲೇಖನವನೋದಿ
ಗರ್ವಮಂ ಬಿಡಿಸದಿರ್ದೊಡೆ ತನ್ನ ಮಾತೆಯಂ
ಸರ್ವಜನಮಂ ಬಂಜೆಯೆನ್ನದಿರ್ದಪುದೆ ತನ
ಗುರ್ವತೋಳ್ಗಳಿವೇತಕೆಂದು ಸಲೆ ವಾಸಿಯಂ ತೊಟ್ಟು ಲವನುರಿದೆದ್ದನು




ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು


# ಅರ್ಥ

ಈ ಭೂಮಿಯಲ್ಲಿ ಕೌಸಲ್ಯೆಯು ಪಡೆದ ಮಗನಾದ ಶ್ರೀರಾಮನೊಬ್ಬನೇ ವೀರ . ಅವನ ಯಜ್ಞ ತುರಗವಿದು . ಇದನ್ನು ಧರಿಸುವ ಸಮರ್ಥರು ಯಾರಾದರೂ ಇದ್ದರೆ ಈ ಕುದುರೆಯನ್ನು ತಡೆಯಿರಿ ಎಂದಿದ್ದನ್ನು ನೋಡಿ ಓಹೋ !ಅವನ (ಶ್ರೀರಾಮನ ) ಗರ್ವವನ್ನು ಮುರಿಯದಿದ್ದರೆ ನನ್ನ ತಾಯಿಯನ್ನು ಎಲ್ಲರೂ ಬಂಜೆಯೆಂದು ಕರೆಯದಿರುವರೇ ? ಅಲ್ಲದೇ ನನ್ನ ತೋಳುಗಳಿದ್ದೂ ಏನು ಪ್ರಯೋಜನ ? ಎಂದರೆ ರಾಮನ ಗರ್ವವನ್ನು ಮುರಿಯುತ್ತೇನೆ ಎಂದು ಪ್ರತಿಜ್ಞೆಯನ್ನು ಮಾಡಿ ಲವನು ಉರಿದೆದ್ದನು .



# ನುಡಿ-೪


ತೆಗೆದುತ್ತರೀಯಮಂ ಮುರಿದು ಕುದುರೆಯ ಗಳಕೆ
ಬಿಗಿದು ಕದಳಿದ್ರುಮಕೆ ಕಟ್ಟಲ್ಕೆ ಮುನಿಸುತರ್
ಮಿಗೆ ನಡುಗಿ ಬೇಡಬೇಡರಸುಗಳ ವಾಜಿಯಂ ಬಿಡು ಬಡಿವರೆಮ್ಮನೆನಲು
ನಗುತೆ ಪಾರ್ವರ ಮಕ್ಕಳಂಜಿದೊಡೆ ಜಾನಕಿಯ
ಮಗನಿದಕೆ ಬೆದರುವನೆ ಪೋಗಿ ನೀವೆಂದು ಲವ
ನಗಡುತನದಿಂದೆ ಬಿಲ್ದಿರುವನೇರಿಸಿ ತೀಡಿ ಜೇಗೈದು ನಿಂತಿರ್ದನು



ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು

# ಅರ್ಥ

ಲವನು ತನ್ನ ಉತ್ತರೀಯವನ್ನು ಹೊಸೆದು , ಅದನ್ನು ಕುದುರೆಯ ಕೊರಳಿಗೆ ಬಿಗಿದು ಬಾಳೆಯ ಮರಕ್ಕೆ ಕಟ್ಟಲು  ಮುನಿಸುತರು ಅತಿಯಾಗಿ ನಡುಗಿ ,ಬೇಡ ಬೇಡ  , ಅರಸರ ಕುದುರೆಯನ್ನು ಬಿಟ್ಟುಬಿಡು ,ಇಲ್ಲವಾದರೆ ನಮ್ಮನ್ನು ಹೊಡೆಯುವರು ಎಂದರು . ಅದಕ್ಕೆ ಲವನು ನಗುತ್ತ ಬ್ರಾಹ್ಮಣರ ಮಕ್ಕಳು ಅಂಜುವರೆಂದರೆ ಜಾನಕಿಯ ಮಗನು ಇದಕ್ಕೆ ಹೆದರುವನೆ ? ಹೋಗಿ ನೀವು ಎಂದು ಶೌರ್ಯದಿಂದ ಬಿಲ್ಲನ್ನು ಹೆದೆಗೇಡಿಸಿ ,ತೀಡಿ ಜೇಂಕಾರ ಮಾಡಿ ನಿಂತಿದ್ದನು .



# ಟಿಪ್ಪಣಿ

ರಘು:  ಸೂರ್ಯ ವಂಶದ ಅರಸ . ತನ್ನ ಪರಾಕ್ರಮದಿಂದ ಭೂಮಂಡಲವನ್ನು ಗೆದ್ದು  'ವಿಶ್ವಜಿತ್ ' ಎಂಬ ಯಾಗ ಮಾಡಿ ಸರ್ವಸ್ವವನ್ನು ದಾನ ಮಾಡಿ  ಪ್ರಸಿದ್ಧನಾದ .ಸೂರ್ಯವಂಶದ ಶ್ರೇಷ್ಠ ಅರಸನಾದ ಕಾರಣ ಈತನ ಕಾಲಾ ನಂತರ ಸೂರ್ಯವಂಶಕ್ಕೆ ರಘುವಂಶ ಎಂಬ ಹೆಸರು ಬಂತು .

ವಾಲ್ಮೀಕಿ : ಒಬ್ಬ ಬ್ರಹ್ಮರ್ಷಿ . ದಾರಿಗಳ್ಳನಾಗಿದ್ದ ಬೇಡ . ನಾರದ ಮಹರ್ಷಿಗಳ ಬೋಧನೆಯಿಂದ ರಾಮನಾಮ ಜಪಿಸುತ್ತಿದ್ದಾಗ ಈತನ ಮೈಮೇಲೆ ಹುತ್ತ(ವಲ್ಮೀಕ ) ಬೆಳೆಯಿತು . ನಾರದ ಮಹರ್ಷಿಗಳಿಂದಾಗಿ ವಲ್ಮೀಕದಿಂದ ಹೊರಗೆ ಬಂದ ಈತನು ವಾಲ್ಮೀಕಿ ಎಂದು ಪ್ರಸಿದ್ಧನಾದನು . ಆದಿಕಾವ್ಯ ರಾಮಾಯಣವನ್ನು ರಚಿಸಿ ಕೀರ್ತಿವಂತನಾದ .

ವರುಣ :ಅಷ್ಟದಿಕ್ಪಾಲಕರಲ್ಲಿ ಒಬ್ಬನಾದ ಈತ ಪಶ್ಚಿಮದಿಕ್ಕಿಗೆ ಒಡೆಯ . ಜಲಾಧಿಪತಿ ಎಂದು ಪ್ರಸಿದ್ಧನಾದವ .

ಲವ : ಶ್ರೀರಾಮನಿಂದ ಸೀತೆಯಲ್ಲಿ ಜನಿಸಿದ ಅವಳಿ ಮಕ್ಕಳಲ್ಲಿ ಚಿಕ್ಕವ . ಶ್ರೀರಾಮನಿಂದ ಪರಿತ್ಯಕ್ತಳಾದ ತುಂಬು ಗರ್ಭಿಣಿ ಸೀತೆ ವಾಲ್ಮೀಕಿ ಆಶ್ರಮದಲ್ಲಿ ಆಶ್ರಯ ಪಡೆದ ಸಂದರ್ಭದಲ್ಲಿ ಜನಿಸಿದವ . ವಾಲ್ಮೀಕಿಯಿಂದ ರಚಿತವಾದ ರಾಮಾಯಣವನ್ನು ಅಣ್ಣ ಕುಶನ ಜೊತೆ ಸೇರಿ ಹಾಡುತ್ತಿದ್ದ .

ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು

# ಟಿಪ್ಪಣಿ

ಅಬ್ಧಿಪ :ಅಬ್ಧಿ -ಸಮುದ್ರ , ಪ -ಒಡೆಯ ,ಅಬ್ಧಿಪ -ಸಮುದ್ರದ ಒಡೆಯ -ವರುಣ

ಜೇಗೆಯ್ : ಬಿಲ್ಲಿಗೆ ಕಟ್ಟುವ ಹಗ್ಗವನ್ನು ಹೆದೆ ಎಂದು ಕರೆಯುತ್ತಾರೆ . ಈ ಹೆದೆಯನ್ನು ಬೇಕಾದಾಗ ಮಾತ್ರ ಬಿಗಿಯಲಾಗುತ್ತದೆ . ಉಳಿದ ಸಂದರ್ಭದಲ್ಲಿ ಬಿಲ್ಲಿನ ಒಂದು ತುದಿಯಲ್ಲಿ ಮಾತ್ರ ಕಟ್ಟಿರುತ್ತಾರೆ . ಯುದ್ಧಕ್ಕೆ ಸನ್ನದ್ಧನಾದಾಗ ಬಿಲ್ಲುಗಾರ ತನ್ನ ಬಿಲ್ಲಿನ ಹೆದೆಯನ್ನು ಅದರ ಇನ್ನೊಂದು ತುದಿಗೆ ಬಿಗಿಯಾಗಿ ಕಟ್ಟುತ್ತಾನೆ . ಈ ಹೆದೆಯ ಬಿಗಿತ ಸರಿಯಾಗಿದ್ದರೆ ಮಾತ್ರ ಬಾಣ ಗುರಿ ಮುಟ್ಟುತ್ತದೆ . ಅದಕ್ಕಾಗಿ ಬಿಲ್ಲುಗಾರ ಬಿಲ್ಲಿನ ಹೆದೆಯನ್ನು ಆಕರ್ಣಾಂತ (ಕಿವಿಯವರೆಗೆ ) ಎಳೆದು ಬಿಡುತ್ತಾನೆ . ಆಗ ಆ ಹೆದೆ ಮೊದಲಿದ್ದ ಸ್ಥಳಕ್ಕೆ ಹೋಗುವಾಗ ' ಝೇಂ ' ಎಂಬ ಧ್ವನಿ ಮಾಡುತ್ತದೆ . ಈ ಧ್ವನಿಯ ಸಹಾಯದಿಂದ ಬಿಲ್ಲುಗಾರ ಹೆದೆಯ ಬಿಗಿತ ಸರಿಯಾಗಿದೆಯೇ ಎಂದು ಪರೀಕ್ಷಿಸುತ್ತಾನೆ .ಈ ಕ್ರಿಯೆಗೆ ' ' ಜೇಗೆಯ್ಯುವುದು ' ಎಂದು ಹೇಳಲಾಗುತ್ತದೆ .

ಪ್ರಸ್ತುತಿ -ಮಮತಾ ಭಾಗ್ವತ್ ಸ. ಶಿ. ಸ.ಪ್ರೌ.ಶಾ. ಬೇಗೂರು